ಅ) ಕುಂದಾಪುರ ಮತ್ತು ಉಡುಪಿ ತಾಲ್ಲೂಕುಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕಾಮಗಾರಿಗಳು ನಡೆಯದೇ ಬಿಲ್ಲು ಪಾವತಿಯಾದ ದೂರುಗಳು ಸರ್ಕಾರಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ ಇದರ ಬಗ್ಗೆ ತನಿಖೆ ನಡೆಸಿ ಸಂಬಂಧ ಪಟ್ಟವರ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆಯೇ?

ಇ) ಹಾಗಿಲ್ಲದಿದ್ದಲ್ಲಿ ಅದಕ್ಕೆ ತೆಗೆದುಕೊಂಡ ಕ್ರಮವೇನು? (ವಿವರವನ್ನು ಒದಗಿಸುವುದು)

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಅ) ಬಂದಿದೆ.

ಆ) ತನಿಖೆ ನಡೆಸಲಾಗುತ್ತಿದೆ.

ಇ) ತನಿಖೆ ಪೂರ್ಣಗೊಂಡ ನಂತರ ಸಂಬಂಧಪಟ್ಟವರ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಉಡುಪಿ ಹಾಗೂ ಕುಂದಾಪುರ ತಾಲೂಕುಗಳಲ್ಲಿ ವರಾಹಿ ಏತ ನೀರಾವರಿ ಯೋಜನೆಯಿಂದ ನೀರಾವರಿ ಸೌಲಭ್ಯ ಒದಗಿಸುವುದು.

2991:(3983)

ಶ್ರೀ ಕೆ.ಪ್ರತಾಪಚಂದ್ರಶೆಟ್ಟಿ (ಕುಂದಾಪುರ) ಮಾನ್ಯ ಬೃಹತ್ ನೀರಾವರಿ ಮಂತ್ರಿಗಳು ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ವಾರಾಹಿ ಏತ ನೀರಾವರಿ ಪೂರ್ಣಗೊಂಡರೆ ಯಾವ ಯಾವ ಗ್ರಾಮಗಳಲ್ಲಿ ಎಷ್ಟೆಷ್ಟು ಜಮೀನು ನೀರಾವರಿಯಾಗುವುದು? (ಗ್ರಾಮದ ಹೆಸರು ಮತ್ತು ಸರ್ವೆ ನಂಬರ್ ತಿಳಿಸುವುದು)

2. ಸದರಿ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗವುದು?

ಶ್ರೀ ಕೆ.ಎನ್. ನಾಗೇಗೌಡ (ಬೃಹತ್ ನೀರಾವರಿ ಮಂತ್ರಿಗಳು):

ಅ) ವಾರಾಹಿ ಏತ ನೀರಾವರಿ ಯೋಜನೆಯು ಪೂರ್ಣಗೊಂಡಲ್ಲಿ ಉಡುಪಿ ಮತ್ತು

ಕುಂದಾಪುರ ತಾಲ್ಲೂಕುಗಳ ಸುಮಾರು 9ಗ್ರಾಮಗಳ 6728 ಎಕರೆ ಜಮೀನಿಗೆ ನೀರಾವರಿ ಸೌಲಭ್ಯವಾಗುವುದು. ಮತ್ತು ವಿತರಣಾ ನಾಲೆಗಳ ಸರ್ವೆ ಕಾರ್ಯ ಪ್ರಗತಿಯಲ್ಲಿದ್ದು, ಮುಗಿದನಂತರ ಸರ್ವೇ ನಂಬರ್ ಲಭ್ಯವಾಗುವುದು.

ಆ) ಸದರಿ ಯೋಜನೆಯನ್ನು 1999ರೊಳಗೆ ಪೂರ್ಣಗೊಳಿಸಲು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕೆ.ಆರ್.ಪೇಟೆ ತಾಲ್ಲೂಕು ರಂಗನಾಥಪುರದಲ್ಲಿ ಕೆ.ಇ.ಬಿ. ಸ್ಟೇಷನ್ ಸ್ಥಾಪನೆ.

2996:(4052):

ಶ್ರೀ ಕೆ.ಎಸ್.ಪುಟ್ಟಣ್ಣಯ್ಯ (ಪಾಂಡವಪುರ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಆರ್.ಪೇಟೆ ತಾಲ್ಲೂಕು ರಂಗನಾಥಪುರದಲ್ಲಿ ಕೆ.ಇ.ಬಿ.ಸ್ಟೇಷನ್ ಸ್ಥಾಪಿಸಲು ಸರ್ಕಾರದವರು ಪರಿಶೀಲಿಸುವರೇ;

ಆ) ಹಾಗಿದ್ದಲ್ಲಿ, ಇದರ ಕೆಲಸವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಶರಣ ಬಸಪ್ಪದರ್ಶನಾಪುರ್ (ಇಂಧನ ರಾಜ್ಯ ಸಚಿವರು):

ಅ) ಕೆ.ಆರ್.ಪೇಟೆ ತಾಲ್ಲೂಕಿನ ರಂಗನಾಥ ಪುರದಲ್ಲಿ ಕೆ.ಇ.ಬಿ. ಸಬ್ ಸ್ಟೇಷನ್ ಸ್ಥಾಪಿಸುವ ಪ್ರಸ್ತಾವನೆ ಮಂಡಳಿಯಲ್ಲಿ ಇರುವುದಿಲ್ಲ. ಆದರೆ ಈ ಗ್ರಾಮದಿಂದ ಸುಮಾರು 6 ಕಿ.ಮೀ. ದೂರದಲ್ಲಿ ಇರುವ ಸಂತೇಬಾಚಳ್ಳಿ ಎಂಬ ಗ್ರಾಮದಲ್ಲಿ ಒಂದು 66 ಕೆ.ವಿ. ಸಬ್ ಸ್ಟೇಷನ್ ಸ್ಥಾಪಿಸುವ ಪ್ರಸ್ತಾವನೆಗೆ ಮಂಡಳಿಯ ತಾಂತ್ರಿಕ ಸಮಿತಿಯು ಫೆಬ್ರವರಿ-98ರಲ್ಲಿ ಅನುಮೋದನೆ ನೀಡಿದೆ.

ಆ) ಸಂತೇಬಾಚಹಳ್ಳಿ ಗ್ರಾಮದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ 66:11 ಕೆ.ವಿ. ವಿದ್ಯುತ್ ಸಬ್-ಸ್ಟೇಷನ್‌ನ ಕಾಮಗಾರಿಯ ಪ್ರಾರಂಭಿಕ ಕೆಲಸಗಳಿಗಾಗಿ ಪ್ರಸಕ್ತ ಸಾಲಿನ (1998-99)ರ ಆಯವ್ಯಯದಲ್ಲಿ 5.0 ಲಕ್ಷ ರೂ.ಗಳನ್ನು ಒದಗಿಸಲಾಗಿದೆ. ಮಂಡಳಿಯು ಎದುರಿಸುತ್ತಿರುವ ಆರ್ಥಿಕ ಮುಗ್ಗಟ್ಟಿನ ಪರಿಸ್ಥಿತಿಯಲ್ಲಿ, ಸದರೀ ಸಬ್ ಸ್ಟೇಷನ್ನಿನ ಕಾಮಗಾರಿಯನ್ನು ಮಂಡಳಿಯ ಸ್ವಂತ ಸಂಪನ್ಮೂಲಗಳಿಂದ ಕೈಗೊಳ್ಳಲು ಸಾಧ್ಯವಿಲ್ಲ. ಆದುದರಿಂದ ಗ್ರಾಮೀಣ ವಿದ್ಯುದೀಕರಣ ನಿಗಮದಿಂದ ಸಾಲ ಸೌಲಭ್ಯವನ್ನು ಪಡೆಯಲು ಪ್ರಯತ್ನಿಸಲಾಗುತ್ತಿದೆ. ಸದರೀ ಸಬ್ ಸ್ಟೇಷನ್ನಿ ನಿರ್ಮಾಣಕ್ಕೆ ಬೇಕಾಗುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ.